# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

23

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಆದೇಶಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 7/1/2021


# ಗೋ ಕಾಯಿದೆ ಪ್ರಶ್ನಿಸಿ ಅರ್ಜಿ, ಕೋರ್ಟ್ ತರಾಟೆ

■ **ವಿಕ ಸುದ್ದಿಲೋಕ** ಬೆಂಗಳೂರು 7/1/21

ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ, ಸಂರಕ್ಷಣಾ ವಿಧೇಯಕ-2020ಕ್ಕೆ ಸಂಬಂಧಿಸಿದ ಸುಗ್ರೀವಾಜ್ಞೆಯನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.



ಸಾಮಾಜಿಕ ಕಾರ್ಯಕರ್ತ ಆರೀಫ್ ಜಮೀಲ್ ಸುಗ್ರೀವಾಜ್ಞೆಯನ್ನು ಅಸಂವಿಧಾನಿಕವೆಂದು ಘೋಷಿಸಿ ರದ್ದುಪಡಿಸಬೇಕು ಎಂದು ಕೋರಿ ಅರ್ಜಿ ಸಲ್ಲಿಸಿ, ಅರ್ಜಿ ಇತ್ಯರ್ಥ ಆಗುವವರೆಗೂ ಸುಗ್ರೀವಾಜ್ಞೆ ಜಾರಿಗೆ ತಡೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಅರ್ಜಿದಾರರ ಪರ ವಕೀಲ ರೆಹಮತ್ ವುಲ್ಲಾ ಕೊತ್ವಾಲ್, ಬುಧವಾರ ಮಧ್ಯಾಹ್ನ 2.30ಕ್ಕೆ ಸಿಜೆ ಎ.ಎಸ್.ಓಕ ನೇತೃತ್ವದ ವಿಭಾಗೀಯಪೀಠದ ಮುಂದೆ ಹಾಜರಾಗಿ, ಅರ್ಜಿಯನ್ನು ರಿಜಿಸ್ಟ್ರಾರ್ ಅವರಿಗೆ ಇ-ಮೇಲ್ ಮಾಡಲಾಗಿದೆ. ಅರ್ಜಿಯಲ್ಲಿ ಎತ್ತಿರುವ ವಿಚಾರವು ಗಂಭೀರವಾಗಿದ್ದು ತುರ್ತು ವಿಚಾರಣೆ ನಡೆಸಬೇಕು ಎಂದು ಕೋರಿ ಮೆಮೊ ಸಲ್ಲಿಸಿದರು.

ಅದನ್ನು ಆಕ್ಷೇಪಿಸಿದ ನ್ಯಾಯಪೀಠ, ''ಮಧ್ಯಾಹ್ನ 1 ಗಂಟೆಗೆ ರಿಜಿಸ್ಟ್ರಾರ್‌ಗೆ ಅರ್ಜಿಯನ್ನು ಇ-ಮೇಲ್ ಮಾಡಿದ್ದೀರಿ. 2.30ಕ್ಕೆ ತುರ್ತು ವಿಚಾರಣೆಗೆ ಕೋರುತ್ತೀರಿ. ಇದು ಸರಿಯಾದ ನಡೆಯಲ್ಲ, ಅರ್ಜಿ ಸಲ್ಲಿಸಿದ ನಂತರ ಏಳು ದಿನಗಳೊಳಗೆ ವಿಚಾರಣೆ ನಿಗದಿಯಾಗಲಿದೆ. ಈಗಲೇ ತುರ್ತು ವಿಚಾರಣೆ ಅಗತ್ಯವೇನಿದೆ,'' ಎಂದು ಪ್ರಶ್ನಿಸಿದರು. ಕೊತ್ವಾಲ್ ಉತ್ತರಿಸಿ, ''ಸುಗ್ರಿವಾಜ್ಞೆ ಜಾರಿಯಿಂದ ಸಮಾಜದಲ್ಲಿ ಗೊಂದಲ ಹಾಗೂ ಸಂಘರ್ಷ ನಿರ್ಮಾಣವಾಗುವ ಸಾಧ್ಯತೆಯಿದೆ,'' ಎಂದರು. ಪೀಠ, ''ಸುಗ್ರೀವಾಜ್ಞೆ ಹೊರಬಿದ್ದ ಕೂಡಲೇ ಅರ್ಜಿಯನ್ನು ವಿಚಾರಣೆಗೆ ಪರಿಗಣಿಸಬೇಕೆಂದಿಲ್ಲ, ನಿಗದಿತ ಪ್ರಕ್ರಿಯೆಯಲ್ಲಿ ಅರ್ಜಿ ವಿಚಾರಣೆಗೆ ಬರಲಿ. ಇಂತಹ ನಡೆಯು ಸಹಿಸಲಾಗದು, ಇದೇ ಮುಂದುವರಿದರೆ ಅರ್ಜಿದಾರರಿಗೆ ದಂಡ ವಿಧಿಸಬೇಕಾಗುತ್ತದೆ,'' ಎಂದು ಎಚ್ಚರಿಸಿತು.